# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

12

ಇಲಾಖೆ / ವಿಷಯ : DEPARTMENT / SUBJECT: ಬಿಬಿಎಂಪಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 1/1/2021

## ನಾಮಕರಣ ನಿರ್ಣಯ ರದ್ದು ಕೋರಿ ಪ್ರಸ್ತಾವ

ವಿಕ ಸುದ್ದಿಲೋಕ ಬೆಂಗಳೂರು

ಬಿಬಿಎಂಪಿಯ ಪಾದರಾಯನಪುರ ವಾರ್ಡ್‌ನ 11 ಅಡ್ಡರಸ್ತೆ, ಮುಖ್ಯ ರಸ್ತೆಗಳಿಗೆ ಹೊಸದಾಗಿ ಹಲವರ ಹೆಸರು ನಾಮಕರಣ ಮಾಡಲು ಕೈಗೊಂಡಿದ್ದ ನಿರ್ಣಯವನ್ನು ರದ್ದುಪಡಿಸುವಂತೆ ಕೋರಿ ಆಯುಕ್ತ ಎನ್.ಮಂಜುನಾಥ ಪ್ರಸಾದ್, ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಿಗೆ ಪ್ರಸ್ತಾವ ಸಲ್ಲಿಸಿದ್ದಾರೆ.

ಪಾದರಾಯನಪುರ ವಾರ್ಡ್ ವ್ಯಾಪ್ತಿಯ 9 ರಸ್ತೆಗಳು, ಎರಡು ವೃತ್ತಗಳಿಗೆ ಮುಸ್ಲಿಂ ಸಮುದಾಯದ ಸಮಾಜಸೇವಕರ ಹೆಸರನ್ನು ನಾಮಕರಣ ಮಾಡುವ ಸಂಬಂಧ ಸೆ. 8ರಂದು ಪಾಲಿಕೆಯ ಕೌನ್ಸಿಲ್ ಸಭೆ ನಿರ್ಣಯ ಕೈಗೊಂಡಿತ್ತು. ಈ ಹಿನ್ನೆಲೆಯಲ್ಲಿ ಆಕ್ಷೇಪಣೆ, ಸಲಹೆಗಳನ್ನು ಆಹ್ವಾನಿಸಿ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿತ್ತು. ಇದಕ್ಕೆ ಸಂಸದರಾದ ಅನಂತ ಕುಮಾರ್ ಹೆಗಡೆ, ಪಿ.ಸಿ.ಮೋಹನ್, ತೇಜಸ್ವಿ ಸೂರ್ಯ ಸೇರಿದಂತೆ ಹಲವರು ತೀವ್ರ ವಿರೋಧ ವ್ಯಕ್ತಪಡಿಸಿದ್ದರು.